ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಮಹಿಳಾ ಮತ್ತು ಮಕ್ಕಳ ಇಲಾಖೆಯಡಿ ವಿವಿಧ ಯೋಜನೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

415 (530) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 3 ವರ್ಷಗಳಲ್ಲಿ ಮಂಡ್ಯ ಜಿಲ್ಲೆಯ ಮಹಿಳಾ ಆಯೋಗಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ಈ ಪೈಕಿ ಇತ್ಯರ್ಥಪಡಿಸಲಾಗಿರುವ ದೂರುಗಳು ಎಷ್ಟು; ಇತ್ಯರ್ಥಪಡಿಸಲು ಬಾಕಿ ಇರುವ ದೂರುಗಳ ಸಂಖ್ಯೆ ಎಷ್ಟು;

(ಆ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ; ಇದರಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; ಇವರಿಗೆ ಆಹಾರವನ್ನು ಯಾವ ಮಾನದಂಡದ ಆಧಾರದಲ್ಲಿ ನೀಡಲಾಗುವುದು; (ಪೂರ್ಣ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಉದ್ಯೋಗಿನಿ ಯೋಜನೆಯಡಿಯಲ್ಲಿ ಸಾಲ ಕೋರಿ ಸಲ್ಲಿಸಿರುವ ಅರ್ಜಿಗಳೆಷ್ಟು; ಇದರಲ್ಲಿ ಮಂಜೂರಾದ ಸಂಖ್ಯೆ ಎಷ್ಟು; ಅನುದಾನ ಬಿಡುಗಡೆಗೊಳಿಸಲಾದ ಅರ್ಜಿಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಇಲಾಖೆಯಲ್ಲಿ ಮಾಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಇರುವ ಯೋಜನೆಗಳು ಯಾವುವು ಹಾಗೂ ಅರ್ಹತೆಗಳೇನು; ಕಳೆದ 3 ವರ್ಷಗಳಿಂದ ಇದರ ಅನುಷ್ಠಾನಕ್ಕಾಗಿ ಮಂಡ್ಯ ಜಿಲ್ಲೆಗೆ ನೀಡಲಾದ ಅನುದಾನ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)